ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013-14ನೇ ಸಾಲಿನಲ್ಲಿ ಮಹಾತ್ಮಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಆವರ್ತಕ ವೆಚ್ಚಗಳಿಗಾಗಿ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು

ಓದಲಾಗಿದೆ : ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರ ಪತ್ರ ಸಂಖ್ಯೆ : ಎಂ.ಜಿ.ಐ./ಬಜೆಟ್/22/2012-13/399 ದಿನಾಂಕ 07.08.2013

ಪ್ರಸ್ತಾವನೆ :

2013-14ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) ರೂ. 150.00 ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಲಾಗಿದೆ.

ಓದಲಾದ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರು ಕೋರಿರುವಂತೆ 2013-14ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಸಂಸ್ಥೆಗೆ ನಿಗದಿಪಡಿಸಲಾದ ರೂ. 150.00 ಲಕ್ಷಗಳ ವಾರ್ಷಿಕ ಅನುದಾನದ ಪೈಕಿ ನಿಗದಿಪಡಿಸಲಾದ ಅನುದಾನದಲ್ಲಿ ರೂ. 37.50 ಲಕ್ಷಗಳನ್ನು ಎರಡನೇ ಕಂತಾಗಿ ಹಾಗೂ ಎರಡನೇ ತ್ರೈಮಾಸಿಕದಲ್ಲಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ 2501-04-105-0-02-059(ಯೋಜನೆ)ಯಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/22/ಜೈಅಯೋ/2013 ಬೆಂಗಳೂರು, ದಿನಾಂಕ 23.08.2013.

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2013-14ನೇ ಸಾಲಿನಲ್ಲಿ, ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಎರಡನೇ ತ್ರೈಮಾಸಿಕ ಕಂತನ್ನಾಗಿ ರೂ. 37.50 ಲಕ್ಷಗಳನ್ನು (ರೂ. ಮೂವತ್ತೇಳು ಲಕ್ಷದ ಐವತ್ತು ಸಾವಿರಗಳು ಮಾತ್ರ) ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2501-04-105-0-02-059(ಯೋಜನೆ)ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ : ಗ್ರಾಅಪ 207 ಪಿಬಿಎಸ್ 2013 ದಿನಾಂಕ 21.08.2013ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Hemalatha P

(ಪಿ. ಹೇಮಲತ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮೆ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.